**ಅಸಲು ದಾವಾ ಸಂಖ್ಯೆ: 1185/2025**

**ಪಿಡಬ್ಲೂ -1**

**ದಿಃ 21-07-2026 ರಂದು ಸಾಕ್ಷಿ ಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**
**ಮುಂದುವರೆದ ಮುಖ್ಯ ವಿಚಾರಣೆ ವಾದಿಯ ಪರ ವಕೀಲರಾದ ಶ್ರೀ. BBS ರವರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದ ಸಂಗತಿಗಳು ನಿಜವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಇರುತ್ತದೆ.

ನಾನು ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಈ ಕೆಳಗಿನಂತೆ ಗುರುತಿಸಲಾಯಿತು.

ನನ್ನ ಜನನ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು,

7ನೇ ಪ್ರತಿವಾದಿ ಹಾಗೂ 8ನೇ ಪ್ರತಿವಾದಿ ಶಾಲೆಯವರು ನೀಡಿದ ವ್ಯಾಸಂಗ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿ-2 ಮತ್ತು 3 ಎಂದು,

ನನ್ನ ದ್ವಿತೀಯ ಪಿಯುಸಿ ಅಂಕಪಟ್ಟಿ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು,

9ನೇ ಪ್ರತಿವಾದಿ ಶಾಲೆಯವರು ನೀಡಿದ ವ್ಯಾಸಂಗ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-5 ಎಂದು,

10ನೇ ಪ್ರತಿವಾದಿ ಸಂಸ್ಥೆಯವರು ನೀಡಿದ ಚಾರಿತ್ರ್ಯ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-6 ಎಂದು,

ನನ್ನ ಆಧಾರ ಕಾರ್ಡ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-7 ಎಂದು,

ನನ್ನ ತಂದೆಯ ಆಧಾರ ಕಾರ್ಡ ಹಾಗು ಪ್ಯಾನಕಾರ್ಡ ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿ-8 ಮತ್ತು 9 ಎಂದು,

ನನ್ನ ತಂದೆಯ ಎಸ್ ಎಸ್ ಎಲ್ ಸಿ ಅಂಕಪಟ್ಟಿ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-10 ಎಂದು,

ನನ್ನ ತಂದೆಯ ಶಾಲಾ ವರ್ಗಾವಣೆ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-11 ಎಂದು, ಗುರುತಿಸಲಾಯಿತು.

**<u>ಪಾಟೀ ಸವಾಲು 1 ರಿಂದ 6ನೇ ಪ್ರತಿವಾದಿ ಪರ ವಕೀಲರಾದ ಮಾನ್ಯ ಡಿ.ಜಿ.ಪಿ ರವರಿಂದಃ-</u>**

1. ನಾನು ಬಿಎಸ್‌ಸಿ ನರ್ಸಿಂಗ ವಿದ್ಯಾಭ್ಯಾಸ ಮಾಡುತ್ತಿದ್ದೇನೆ. ನಾನು ಸರ್ಕಾರಿ ಸೀಟನ್ನು ಪಡೆದಿರುವುದಿಲ್ಲ, ಖಾಸಗಿ ಕೋಟಾದಲ್ಲಿ ಪಡೆದಿರುತ್ತೇನೆ. ನನ್ನ ತಂದೆಯ ಹೆಸರು ಜಾಕೀರಹುಸೇನ ಅದನ್ನು ಆಂಗ್ಲ ಭಾಷೆಯಲ್ಲಿ Jakeerhusain ಆಗಿರುತ್ತದೆ. ನನ್ನ ತಂದೆಯ ನನಗೆ ಶಾಲೆಗೆ ದಾಖಲು ಮಾಡುವ ಸಂದರ್ಭದಲ್ಲಿ Jakeerhussain ಎಂದು ಅವರ ಹೆಸರು ಬರೆಸಿರುತ್ತಾರೆ ಎಂದರೆ ಸಾಕ್ಷಿ ಆ ಸಮಯದಲ್ಲಿ ತನ್ನ ಜನನ ಪ್ರಮಾಣ ಪತ್ರದಲ್ಲಿ ಆ ರೀತಿ ನಮೂದಾಗಿತ್ತು ಆದರೆ ನಂತರದಲ್ಲಿ ತಾನು ಜನನ ಪ್ರಮಾಣ ಪತ್ರವನ್ನು ತಿದ್ದುಪಡಿ ಮಾಡಿಕೊಂಡಿರುವುದಾಗಿ ನುಡಿಯುತ್ತಾರೆ. ಶಾಲೆಯವರು ನನ್ನ ಜನನ ಪ್ರಮಾಣ ಪತ್ರದ ಆಧಾರದ ಮೇಲೆ ನನ್ನ ತಂದೆಯ ಹೆಸರನ್ನು ಸರಿಯಾಗಿ ನಮೂದು ಮಾಡಿರುತ್ತಾರೆ ಹಾಗೂ ಅವರ ತಪ್ಪು ಇರುವುದಿಲ್ಲ ಎಂದರೆ ಸರಿಯಲ್ಲ. ಶಾಲೆಗೆ ದಾಖಲಾದ ನಂತರ ನಾನು ಜನನ ಪ್ರಮಾಣ ಪತ್ರದಲ್ಲಿ ತಿದ್ದುಪಡಿ ಮಾಡಿಸಿಕೊಂಡಿರುತ್ತೇನೆ ಎಂದರೆ ಸರಿ. ಆ ರೀತಿ ಹೊಸ ಜನನ ಪ್ರಮಾಣ ಪತ್ರ ಪಡೆದ ನಂತರ ನಾನು ಶಾಲೆಯವರಿಗೆ ಅದೇ ರೀತಿ ತಿದ್ದುಪಡಿ ಕೋರಿ ಅರ್ಜಿ ಸಲ್ಲಿಸಿರುತ್ತೇನೆ. ಆ ಸಮಯದಲ್ಲಿ ನನ್ನ ತಂದೆ ಮಾತ್ರ ಶಾಲೆಗೆ ಹೋಗಿದ್ದರು. ನಾನು ಎಸ್ ಎಸ್ ಎಲ್ ಸಿ ಪರೀಕ್ಷೆಯ ನಮೂನೆಯಲ್ಲಿ ನಾನು ನೀಡಿದ ವಿವರದಂತೆಯೇ ನನ್ನ ತಂದೆಯ ಹೆಸರನ್ನು ನಮೂದು ಮಾಡಿಕೊಂಡಿರುತ್ತಾರೆ, ಇದರಲ್ಲಿ ಎಸ್ ಎಸ್ ಎಲ್ ಸಿ ಬೋರ್ಡನವರ ತಪ್ಪು ಇರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯರದ್ದು ಯಾವುದೇ ತಪ್ಪು ಇಲ್ಲದೇ ಇದ್ದರೂ ಸಹ ಅವರ ವಿರುದ್ಧ ಸುಳ್ಳು ದಾವೆ ಹೂಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ನನ್ನ ಶಾಲಾ ದಾಖಲಾತಿಗಳಲ್ಲಿ ನನ್ನ ತಂದೆಯ ಹೆಸರು ನಮೂದಾಗಿರುವಂತೆಯೇ ಮುಂದುವರೆದರೆ ನನಗೆ ಯಾವುದೇ ತೊಂದರೆ ಆಗುವುದಿಲ್ಲ ಎಂದರೆ ಸರಿಯಲ್ಲ.

**7ನೇ ಪ್ರತಿವಾದಿಯ ಪರ ವಕೀಲರು ಗೈರು ಹಾಜರಿಯಾಗಿದ್ದು ಸಾಕ್ಷಿಯ ಪಾಟೀ ಸವಾಲಿಗೆ ಮುಂದಿನ ದಿನಾಂಕವನ್ನು ನೀಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ ಸರಿಯಿದೆ.**

**Sd/-**

**ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರು,**

**ಬೆಳಗಾವಿ.**